ಮೊಳಕಾಲ್ಮೂರು ತಾಲ್ಲೂಕಿನ ರಾಜ್ಯರಸ್ತೆ ಸಾರಿಗೆ ಬಸ್ ನಿಲ್ದಾಣಗಳು.

2759: (3818)

ಶ್ರೀ ಎನ್.ವೈ.ಗೋಪಾಲಕೃಷ್ಣ (ಮೊಳಕಾಲ್ಮೂರು): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೊಳಕಾಲ್ಮೂರು ತಾಲ್ಲೂಕಿನ ಯಾವ ಯಾವ ಗ್ರಾಮಗಳಲ್ಲಿ ರಾಜ್ಯ ರಸ್ತೆ ಸಾರಿಗೆ ಬಸ್ ನಿಲ್ದಾಣಗಳನ್ನು ನಿರ್ಮಿಸಲಾಗಿದೆ;

ಆ) ಈ ತಾಲ್ಲೂಕಿನ ರಾಮಪುರ ಗ್ರಾಮವು ರಾಜ್ಯ ಹೆದ್ದಾರಿಗೆ ಸೇರಿಕೊಂಡೇ ಇರುವುದರಿಂದ ಈ ಗ್ರಾಮದಲ್ಲಿ ಗ್ರಾಮಸ್ಥರ ಅನುಕೂಲಕ್ಕಾಗಿ ಬಸ್‌ನಿಲ್ದಾಣವನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಪಿ.ಜಿ.ಆರ್.ಸಿಂಧ್ಯ (ಸಾರಿಗೆ ಸಚಿವರು):

ಅ) ಮೊಳಕಾಲ್ಮೂರು ತಾಲ್ಲೂಕಿನ ಯಾವ ಗ್ರಾಮದಲ್ಲೂ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ನಿಲ್ದಾಣಗಳನ್ನು ನಿರ್ಮಿಸಲಾಗಿಲ್ಲ.

ಆ) ರಾಮಪುರದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣವನ್ನು ನಿರ್ಮಿಸಲು ಅವಶ್ಯಕತೆಯು ಸದ್ಯಕ್ಕೆ ಇರುವುದಿಲ್ಲ.

ಮೊಳಕಾಲ್ಮೂರಿನಲ್ಲಿ ಮಿನಿ ವಿಧಾನಸೌಧ ನಿರ್ಮಾಣ.

2760: (3819)

ಶ್ರೀ ಎನ್.ವೈ.ಗೋಪಾಲಕೃಷ್ಣ (ಮೊಳಕಾಲ್ಮೂರು): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೊಳಕಾಲ್ಮೂರಿನಲ್ಲಿ ಮಿನಿ ವಿಧಾನ ಸೌಧವನ್ನು ನಿರ್ಮಿಸಲು ಸರ್ಕಾರ ಉದ್ದೇಶಿಸಿದೆಯೇ?

ಆ) ಇಲ್ಲದಿದ್ದಲ್ಲಿ 1998-99ನೇ ಸಾಲಿನಲ್ಲಿಯೇ ಮೊಳಕಾಲ್ಮೂರಿನಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಬಿ.ಸೋಮಶೇಖರ್ (ಕಂದಾಯ ಸಚಿವರು):

ಅ) ಇಲ್ಲ

ಆ) ಇಲ್ಲ

ರಾಜ್ಯದಲ್ಲಿ ಅತಿವೃಷ್ಟಿಯಿಂದಾದ ಆಸ್ತಿಪಾಸ್ತಿಗಳ ನಷ್ಟ.

2764: (3774)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಈ ವರ್ಷ ಯಾವ ಯಾವ ಜಿಲ್ಲೆಗಳಲ್ಲಿ ಅತಿವೃಷ್ಟಿ ಉಂಟಾಗಿದೆ; ಎಷ್ಟು ಜನರು ಮೃತಪಟ್ಟಿದ್ದಾರೆ; ಈ ಹಸಿ ಬರದಿಂದ ಉಂಟಾದ ಆಸ್ತಿಪಾಸ್ತಿಗಳಿಗೆ ಎಷ್ಟು ನಷ್ಟವಾಗಿದೆ?

ಆ) ಈ ರೀತಿ 'ಹಸಿ ಬರ' ದಿಂದ ಮೃತಪಟ್ಟವರಿಗೆ ನೊಂದವರಿಗೆ ಬೆಳೆ ಹಾನಿ ಆಸ್ತಿಪಾಸ್ತಿ ನಷ್ಟವಾದವರಿಗೆ ಸರ್ಕಾರ ಎಷ್ಟು ಹಣ ಮಂಜೂರು ಮಾಡಿದೆ ಮತ್ತು ಎಷ್ಟು ಹಣ ಹಂಚಲಾಗಿದೆ?

ಇ) ಕೇಂದ್ರ ಸರ್ಕಾರದಿಂದ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ? ಇನ್ನೂ ಎಷ್ಟು ಹಣ ಬಿಡುಗಡೆಗೆ ಕೇಂದ್ರ ಸರ್ಕಾರಕ್ಕೆ ಬೇಡಿಕೆ ಸಲ್ಲಿಸಲಾಗಿದೆ(ಜಿಲ್ಲಾವಾರು ವಿವರಗಳನ್ನು ಒದಗಿಸುವುದು)

ಶ್ರೀ ಬಿ.ಸೋಮಶೇಖರ್ (ಕಂದಾಯ ಸಚಿವರು):

ಅ) ರಾಜ್ಯದಲ್ಲಿ ಈ ವರ್ಷ ಎಲ್ಲ ಜಿಲ್ಲೆಗಳಲ್ಲಿ ಅತಿವೃಷ್ಟಿ ಉಂಟಾಗಿರುತ್ತದೆ. 310 ಮಂದಿ ಮೃತಪಟ್ಟಿದ್ದಾರೆ. ಸುಮಾರು ರೂ.797.00 ಕೋಟಿಗಳಷ್ಟು ಮೌಲ್ಯದ ಆಸ್ತಿಗಳಿಗೆ ಹಾನಿಯಾಗಿದೆಯೆಂದು ಅಂದಾಜು ಮಾಡಲಾಗಿದೆ.

ಆ) ಸರ್ಕಾರವು ಎಲ್ಲ ಸೇರಿ ರೂ.67.00 ಕೋಟಿಗಳನ್ನು ಬಿಡುಗಡೆ ಮಾಡಿದೆ.

ಇ) ಈವರೆವಿಗೆ ಕೇಂದ್ರ ಸರ್ಕಾರವು ರೂ.26.11 ಕೋಟಿಗಳನ್ನು ಬಿಡುಗಡೆ ಮಾಡಿದೆ. ಹೆಚ್ಚುವರಿಯ ರೂ.800.00 ಕೋಟಿಗಳ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ.